# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 448(620) |
| ಸದಸ್ಯರ ಹೆಸರು : | ಶ್ರೀ ಎಸ್ ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ ) |
| ಉತ್ತರಿಸಬೇಕಾದ ದಿನಾಂಕ : | 23.12.2022 |
| ಉತ್ತರಿಸುವ ಸಚಿವರು : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಹಿಂದುಳಿದ ವರ್ಗಗಳ ಕಲ್ಯಾಣ ವ್ಯಾಪ್ತಿಗೆ ಬರುವ ವಿವಿಧ ನಿಗಮ ಮಂಡಳಿಗಳಿಂದ ನೀಡುತ್ತಿರುವ ಸಾಲ ಸೌಲಭ್ಯಗಳನ್ನು ನೀಡಲು ನಿಗದಿ ಪಡಿಸಿರುವ ನಿಬಂಧನೆಗಳಾವುವು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ವಿವಿಧ ನಿಗಮ ಮಂಡಳಿಗಳಿಂದ ಸಾಲ ಸೌಲಭ್ಯಗಳನ್ನು ನೀಡಲು ನಿಗಧಿ ಪಡಿಸಿರುವ ನಿಬಂಧನೆಗಳನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |
| (ಆ) | ಈ ನಿಬಂಧನೆಗಳು ಬಹಳ ಕಠಿಣವಾಗಿರುವುದರಿಂದ ಬಡವರ್ಗದ ಜನರ ಅನುಕೂಲಕ್ಕಾಗಿ ಈ ನಿಯಮಗಳನ್ನು ಸರಳೀಕರಣ ಮಾಡಲು ಯಾವ ಕ್ರಮ ಕೈಗೊಂಡಿದೆ: ಈ ಹಿಂದೆ ವಿವಿಧ ಯೋಜನೆಗಳಲ್ಲಿ ನೀಡಿರುವ ಸಾಲವನ್ನು ಪೂರ್ಣ ಪ್ರಮಾಣದಲ್ಲಿ ಮನ್ನಾ ಮಾಡಲು ಸರ್ಕಾರ ತೆಗೆದುಕೊಂಡಿರುವ ನಿಲುವೇನು? | ನಿಗಮಗಳಲ್ಲಿ ವಿವಿಧ ಯೋಜನೆಗಳಲ್ಲಿ ಸಾಲ ಸೌಲಭ್ಯ ಪಡೆಯಲು ಫಲಾಪೇಕ್ಷಿಗಳು ಸುವಿಧಾ ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸುವುದರ ಬದಲು ಸರಳೀಕೃತಗೊಳಿಸಿ ಸೇವಾಸಿಂಧು ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡಲಾಗಿದೆ.<br><br>ಈ ಹಿಂದೆ ವಿವಿಧ ಯೋಜನೆಗಳಲ್ಲಿ ನೀಡಿರುವ ಸಾಲವನ್ನು ಪೂರ್ಣ ಪ್ರಮಾಣದಲ್ಲಿ ಮನ್ನಾ ಮಾಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

**ಸಂಖ್ಯೆ**:ಹಿಂವಕ 782 ಬಿಂಎಂಎಸ್ 2022

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು

# ಅನುಬಂಧ

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ- 620(448)ಕ್ಕೆ ನಿಗಮದ ಉತ್ತರ.

ನಿಗಮಗಳ ವಿವಿಧ ಯೋಜನೆಗಳಲ್ಲಿ ಸಾಲ ಸೌಲಭ್ಯ ಪಡಿಯಲ್ಲು ನಿಗಧಿ ಪಡಿಸಿರುವ ನಿಬಂಧನೆಗಳು ಈ ಕೆಳಕಂಡಂತಿದೆ.

ನಿಬಂಧನೆಗಳು:

## ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ.

1. ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರ-1, 2ಎ, 3ಎ ಮತ್ತು 3ಬಿ ಸೇರಿದವರಾಗಿರಬೇಕು. (ಕರ್ನಾಟಕ ಉಪ್ಪಾರ, ಅಂಬಿಗರ ಚೌಡಯ್ಯ, ಅಲೆಮಾರಿ/ಅರೆಅಲೆಮಾರಿ, ಸವಿತಾ ಸಮಾಜ, ವಿಶ್ವಕರ್ಮ, ಮಡಿವಾಳ ಮಾಚಿದೇವ, ಒಕ್ಕಲಿಗ, ಲಿಂಗಾಯಿತ ನಿಗಮಗಳನ್ನು ಹೊರತುಪಡಿಸಿ)
2. ಅರ್ಜಿದಾರರು ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶಗಳಿಗೆ ರೂ.98,000/- ಹಾಗೂ ನಗರ ಪ್ರದೇಶಗಳಿಗೆ ರೂ.1,20,000/- ಗಳಾಗಿರುತ್ತದೆ.
3. ಅರ್ಜಿದಾರರ ವಯಸ್ಸು 18 ವರ್ಷಗಳಿಗಿಂತ ಹೆಚ್ಚು ಹಾಗೂ 55 ವರ್ಷಗಳೊಳಗಿರಬೇಕು.
4. ಅರ್ಜಿದಾರರು ಕರ್ನಾಟಕದ ನಿವಾಸಿಯಾಗಿರಬೇಕು.
5. ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಲ್ಲಿ ಫಲಾಪೇಕ್ಷಿಗಳು ಕಡ್ಡಾಯವಾಗಿ ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.
6. **ಗಂಗಾ ಕಲ್ಯಾಣ** ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿದಾರರು ಕನಿಷ್ಠ 2 ಎಕರೆ ಹಾಗೂ ಗರಿಷ್ಠ 5 ಎಕರೆ ಜಮೀನು ಹೊಂದಿದ್ದು, ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿಲ್ಲದೆ ಇರುವ ಸಣ್ಣ ಹಾಗೂ ಅತಿ ಸಣ್ಣ ರೈತರಾಗಿದ್ದು, **ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಕೊಡಗು, ಹಾಸನ, ಚಿಕ್ಕಮಗಳೂರು** ಹಾಗೂ **ಶಿವಮೊಗ್ಗ** ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು.
7. ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಅರ್ಜಿದಾರರು ವರಮಾನ ರೂ.3.50 ಲಕ್ಷಗಳೊಳಗಿರಬೇಕು.
   ಅರ್ಜಿದಾರರ ವಯಸ್ಸು 18 ವರ್ಷಗಳಿಗಿಂತ ಹೆಚ್ಚು ಹಾಗೂ 30 ವರ್ಷಗಳೊಳಗಿರಬೇಕು.
   ಅರ್ಜಿದಾರರು ಸಿ.ಇ.ಟಿ ಪರೀಕ್ಷೆ ತೇರ್ಗಡೆ ಹೊಂದಿರಬೇಕು.

## ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ.

1. ಅರ್ಜಿದಾರರು ಪ್ರ-1, ರಲ್ಲಿ ಬರುವ 1.ಅಗಸ 2.ಚಕಲ 3.ಧೋಬಿ 4.ಮಡಿವಾಳ 5.ಮನ್ನನ್ 6.ಪರಿತ್ 7.ರಾಜಕ 8.ಸಕಲ 9.ವನ್ನನ್ 10.ವೆಲ್ಲುತೇಡನ್ 11.ಸಾಕಲವಾಡು
2. ಅರ್ಜಿದಾರರು ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶಗಳಿಗೆ ರೂ.98,000/- ಹಾಗೂ ನಗರ ಪ್ರದೇಶಗಳಿಗೆ ರೂ.1,20,000/- ಗಳಾಗಿರುತ್ತದೆ.
3. ಅರ್ಜಿದಾರರ ವಯಸ್ಸು 18 ವರ್ಷಗಳಿಗಿಂತ ಹೆಚ್ಚು ಹಾಗೂ 55 ವರ್ಷಗಳೊಳಗಿರಬೇಕು.
4. ಅರ್ಜಿದಾರರು ಕರ್ನಾಟಕದ ನಿವಾಸಿಯಾಗಿರಬೇಕು.
5. ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಲ್ಲಿ ಫಲಾಪೇಕ್ಷಿಗಳು ಕಡ್ಡಾಯವಾಗಿ ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.

## ಕರ್ನಾಟಕ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ ನಿಗಮ.

1. ಅರ್ಜಿದಾರರು ಪ್ರ–1, ರಲ್ಲಿ ಬರುವ 1)ಬೈರಾಗಿ (ಬಾವ), 2)ಬಾಲ ಸಂತೋಷಿ–ಜೋಷಿ, 3)ಬಾಜಿಗರ್, 4)ಭರಡಿ. 5)ಬುಡಬುಡಕಿ–ಜೋಶಿ–ಗೋಂಧಳಿ, 6)ಚಾರ, 7)ಚಿತ್ರಕಥಿ–ಜೋಷಿ, 8)ಧೋಲಿ, 9)ಢವೇರಿ, 10)ದೊಂಬರಿ, 11)ಘಿಸಾಡಿ, 12)ಗರುಡಿ, 13)ಗೋಪಾಲ್, 14)ಗೊಂದಳಿ, 15)ಹೆಳವ, 16)ಜೋಗಿ, 17)ಕೇಲ್ಕರಿ, 18)ಕೋಲ್ಹಟಿ, 19)ನಂದಿವಾಲ–ಜೋಷಿ–ಗೊಂದಳಿ, ಮಲ್ಕಾಲ್ಲಿ, 20)ನಾಥಪಂಥಿ–ಡೌರಿ–ಗೋಸಾವಿ, 21)ನಿರ್ಶಿಕಾರಿ, 22)ಪಾಂಗ್ಯುಯಲ್, 23)ಜೋಷಿ (ಸಾದ ಜೋಷಿ), 24)ಸಾನ್ಸಿಯ, 25)ಸರಾನಿಯ, 26)ತಿರುಮಲಿ, 27)ವಾಯ್ದು, 28)ವಾಸುದೇವ್, 29)ವಾಡಿ, 30)ವಾಗ್ರಿ, 31)ವಿರ್, 32)ಬಜನಿಯ, 33)ಶಿಕ್ಕಲಿಗರ್, 34)ಗೊಲ್ಲ, 35)ಕಿಲ್ಲಿಕ್ಯಾತಸ್, 36)ಸರೋಡಿ, 37)ದುರ್ಗ–ಮುರ್ಗ (ಬುರ್ಬುರ್ಚ), 38)ಹಾವಗಾರ್ (ಹಾವಾಡಿಗಾರ್), 39)ಪಿಚಗುಂಟಲ, 40) ಮಸಣಿಯ ಯೋಗಿ, 41)(ಬೆಸ್ತರ್) ಬುಂಡಬೆಸ್ತ, 42) ಕಟಬು, 43) ದರ್ವೇಶ್, 44) ಕಾಶಿ ಕಪಾಡಿ, 45)ದೊಂಬಿದಾಸ ಮತ್ತು 46)ಬೈಲ್ಪತರ್ ಜನಾಂಗಕ್ಕೆ ಸೇರಿದವರಾಗಿರಬೇಕು.
2. ಅರ್ಜಿದಾರರು ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶಗಳಿಗೆ ರೂ.98,000/– ಹಾಗೂ ನಗರ ಪ್ರದೇಶಗಳಿಗೆ ರೂ.1,20,000/– ಗಳಾಗಿರುತ್ತದೆ.
3. ಅರ್ಜಿದಾರರ ವಯಸ್ಸು 18 ವರ್ಷಗಳಿಗಿಂತ ಹೆಚ್ಚು ಹಾಗೂ 55 ವರ್ಷಗಳೊಳಗಿರಬೇಕು.
4. ಅರ್ಜಿದಾರರು ಕರ್ನಾಟಕದ ನಿವಾಸಿಯಾಗಿರಬೇಕು.
5. ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಲ್ಲಿ ಫಲಾಪೇಕ್ಷಿಗಳು ಕಡ್ಡಾಯವಾಗಿ ಆನ್–ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.

## ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ.

1. ಅರ್ಜಿದಾರರು ಪ್ರ–1, ರಲ್ಲಿ ಬರುವ 1.ಪರಿಯಾಳ (ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ) 2.ಅಂಬಟ್ಟನ್ 3.ಬಜಂತ್ರಿ 4.ಬಂಡಾರಿ 5.ಚೌರಿಯ 6.ಹಡಪದ 7.ಕವ್ವುಟಿಯನ್ 8.ಕೆಲಸಿ 9.ಕ್ಷೌರಿಕ 10.ಕ್ಷೌರಿದ್ 11.ಮಹಾಲೆ 12.ಮಂಗಳ 13.ನಾಡಿಗ 14.ನಾಪಿತ 15.ನವಲಿಗ್ 16.ನಾವಿ 17.ನಯನಜ ಕ್ಷತ್ರಿಯ 18.ಸ್ನಾವಿ 19.ವಾಜಾಂತ್ರಿ(ಉತ್ತರ ಕನ್ನಡ ಜಿಲ್ಲೆ) 20.ಸವಿತ 21.ನಯನಜ ಕ್ಷತ್ರಿ 22.ನಾಡಿಗ್ 23.ಕ್ಷೌರಿಕ್ 24.ಕ್ಷೌರಿಕ
2. ಅರ್ಜಿದಾರರು ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶಗಳಿಗೆ ರೂ.98,000/– ಹಾಗೂ ನಗರ ಪ್ರದೇಶಗಳಿಗೆ ರೂ.1,20,000/– ಗಳಾಗಿರುತ್ತದೆ.
3. ಅರ್ಜಿದಾರರ ವಯಸ್ಸು 18 ವರ್ಷಗಳಿಗಿಂತ ಹೆಚ್ಚು ಹಾಗೂ 55 ವರ್ಷಗಳೊಳಗಿರಬೇಕು.
4. ಅರ್ಜಿದಾರರು ಕರ್ನಾಟಕದ ನಿವಾಸಿಯಾಗಿರಬೇಕು.
5. ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಲ್ಲಿ ಫಲಾಪೇಕ್ಷಿಗಳು ಕಡ್ಡಾಯವಾಗಿ ಆನ್–ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.

ವ್ಯವಸ್ಥಾಪಕ ನಿರ್ದೇಶಕರು.

## ಅನುಬಂಧ

ಹಿಂದುಳಿದ ವರ್ಗಗಳ ಕಲ್ಯಾಣ ವ್ಯಾಪ್ತಿಗೆ ಬರುವ ವಿವಿಧ ನಿಗಮ ಮಂಡಳಿಗಳಿಂದ ನೀಡುತ್ತಿರುವ ಸಾಲ ಸೌಲಭ್ಯಗಳನ್ನು ನೀಡಲು ನಿಗಧಿಪಡಿಸಿರುವ ಸಾಮಾನ್ಯ ನಿಬಂಧನೆಗಳು ಈ ಕೆಳಕಂಡಂತಿವೆ.

1. ಅರ್ಜಿದಾರರು ಹಿಂದುಳಿದ ವರ್ಗಗಳಿಗೆ ಸೇರಿದವರಾಗಿರಬೇಕು.
2. ಅರ್ಜಿದಾರರು ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶಗಳಿಗೆ ರೂ.98,000/- ಹಾಗೂ ನಗರ ಪ್ರದೇಶಗಳಿಗೆ ರೂ.1,20,000/- ಗಳಾಗಿರುತ್ತದೆ
3. ಅರ್ಜಿದಾರರ ವಯಸ್ಸು 18 ವರ್ಷಗಳಿಗಿಂತ ಹೆಚ್ಚು ಹಾಗೂ 55 ವರ್ಷಗಳೊಳಗಿರಬೇಕು.
4. ಅರ್ಜಿದಾರರು ಕರ್ನಾಟಕದ ನಿವಾಸಿಯಾಗಿರಬೇಕು.
5. ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಲ್ಲಿ ಫಲಾಪೇಕ್ಷಿಗಳು ಕಡ್ಡಾಯವಾಗಿ ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.
6. ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿದಾರರು ಕನಿಷ್ಠ 2 ಎಕರೆ ಹಾಗೂ ಗರಿಷ್ಠ 5 ಎಕರೆ ಜಮೀನು ಹೊಂದಿದ್ದು, ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿಲ್ಲದೆ ಇರುವ ಸಣ್ಣ ಹಾಗೂ ಅತಿ ಸಣ್ಣ ರೈತರಾಗಿದ್ದು, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಕೊಡಗು, ಹಾಸನ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು.
7. ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಅರ್ಜಿದಾರರು ವರಮಾನ ರೂ.3.50 ಲಕ್ಷಗಳೊಳಗಿರಬೇಕು. ಅರ್ಜಿದಾರರ ವಯಸ್ಸು 18 ವರ್ಷಗಳಿಗಿಂತ ಹೆಚ್ಚು ಹಾಗೂ 30ವರ್ಷಗಳೊಳಗಿರಬೇಕು ಮತ್ತು ಅರ್ಜಿದಾರರು ಸಿ.ಇ.ಟಿ ಪರೀಕ್ಷೆ ತೇರ್ಗಡೆ ಹೊಂದಿರಬೇಕು.
8. ಮಹಿಳೆಯರಿಗೆ ಶೇ.33 ರಷ್ಟು ಹಾಗೂ ಅಂಗವಿಕಲರಿಗೆ ಶೇ.5ರಷ್ಟು ಮೀಸಲಾತಿಯನ್ನು ನಿಗದಿಪಡಿಸಿದೆ.
9. ಒಂದು ಕುಟುಂಬದ ಒಬ್ಬ ಸದಸ್ಯರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು.
10. ಸರ್ಕಾರವು ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆಗಳನ್ನು ಹೊಂದಿದವರಾಗಿರಬೇಕು.
11. ಅರ್ಜಿದಾರರು ಕಡ್ಡಾಯವಾಗಿ ರಾಷ್ಟ್ರೀಕೃತ ಬ್ಯಾಂಕ್ ನಲ್ಲಿ ಉಳಿತಾಯ ಖಾತೆ ಹೊಂದಿರಬೇಕು.

ಅನುಬಂಧ-

1. ಬಸವ ಬೆಳಗು (ವೃತ್ತಿಪರ ಕೋರ್ಸ್‌ಗಳಿಗೆ ಆರ್ಥಿಕ ನೆರವು)

ನಿಬಂಧನೆಗಳು:

- ಅರ್ಜಿದಾರರು ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿರಬೇಕು ಹಾಗೂ ಸಂಬಂಧಪಟ್ಟ ಪ್ರಾಧಿಕಾರದಿಂದ ಜಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.
- ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ (ಸಿ.ಇ.ಟಿ/ನೀಟ್/ಜೆಇಇ ಇತ್ಯಾದಿ) ಪದವಿ/ಸ್ನಾತಕೋತ್ತರ ಪದವಿ ಕೋರ್ಸ್ ಗಳಿಗೆ ಪ್ರವೇಶ ಪಡೆದಿರಬೇಕು
- ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ. 3.50 ಲಕ್ಷಗಳ ಮಿತಿಯಲ್ಲಿರಬೇಕು.
- ತಾಂತ್ರಿಕೇತರ ಪದವಿ / ಸ್ನಾತ್ತಕೋತ್ತರ ಕೋರ್ಸ್‌ಗಳಿಗೆ ಆಯ್ಕೆಯಾಗಿರುವ ಅಭ್ಯಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.

2. ವಿದೇಶ ವಿದ್ಯಾವಿಕಾಸ (ಮಾನ್ಯತೆ ಪಡೆದಿರುವಂತಹ ವಿದೇಶಿ ವಿಶ್ವವಿದ್ಯಾನಿಲಯಗಳಲ್ಲಿ ಉನ್ನತ ವಿದ್ಯಾಭ್ಯಾಸಕ್ಕೆ ಆರ್ಥಿಕ ನೆರವು)

ನಿಬಂಧನೆಗಳು:

- ಆದಾಯ ಮಿತಿ: ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 6 ಲಕ್ಷಗಳು.
- ವಯೋಮಿತಿ: ಅಭ್ಯರ್ಥಿಯ ವಯಸ್ಸು 25 (ಸ್ನಾತಕೊತ್ತರ ಪದವೀಧರರಿಗೆ) ಮತ್ತು ಪಿಎಚ್.ಡಿ ಪದವೀಧರರಿಗೆ 27 ವರ್ಷಗಳ ವಯೋಮಿತಿಯಲ್ಲಿರಬೇಕು.
- ಅರ್ಹತಾ ಪರೀಕ್ಷೆಯಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು.
- ವ್ಯಾಸಂಗಕ್ಕೆ ಪ್ರವೇಶ ಪಡೆದ ಬಗ್ಗೆ ವಿದೇಶಿ ವಿಶ್ವವಿದ್ಯಾಲಯಗಳ ಪ್ರವೇಶ ಪತ್ರ ವೀಸಾ, ಪಾಸ್ಪೋರ್ಟ್, ಏರ್‌ಟಿಕೇಟ್ ಪ್ರತಿ ಒದಗಿಸಬೇಕು.
- ಸಾಲದ ಭದ್ರತೆಗೆ ವಿದ್ಯಾರ್ಥಿಯ ತಂದೆ ಅಥವಾ ಜಾಮೀನುದಾರರು ಹೊಂದಿರುವ ಸ್ಥಿರಾಸ್ತಿಯನ್ನು ನಿಗಮಕ್ಕೆ ಆಧಾರ ಮಾಡಬೇಕು (ಕೊಲ್ಯಾಟರಲ್ ಸೆಕ್ಯೂರಿಟಿ).

3. ಪರಿಪೂರ್ಣದೆಡೆಗೆ (ಸಂಶೋಧನಾ ವ್ಯಾಸಂಗ ಮಾಡುವ ಅಭ್ಯರ್ಥಿಗಳಿಗೆ ಆರ್ಥಿಕ ನೆರವು)

ನಿಬಂಧನೆಗಳು:

- ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ರೂ.3.50 ಲಕ್ಷಗಳು.
- ಅರ್ಜಿದಾರರು ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿರಬೇಕು ಹಾಗೂ ಸಂಬಂಧಪಟ್ಟ ಪ್ರಾಧಿಕಾರದಿಂದ ಜಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.
- ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪೂರ್ಣಾವಧಿ (fulltime) ಪಿಹೆಚ್.ಡಿ. ಅಧ್ಯಯನದಲ್ಲಿ ತೊಡಗಿರಬೇಕು. ಈ ಸೌಲಭ್ಯವನ್ನು ಪಡೆಯಲಿಚ್ಚಿಸುವ ಅಭ್ಯರ್ಥಿಯು ಭಾರತ ಸರ್ಕಾರ/ಕರ್ನಾಟಕ ಸರ್ಕಾರ/ವಿಶ್ವವಿದ್ಯಾಲಯ ಅಥವಾ ಇತರೆ ಯಾವುದೇ ಸಂಸ್ಥೆಗಳಿಂದ ಮಾಸಿಕ ವ್ಯಾಸಂಗ ವೇತನ / ಫೆಲೋಶಿಫ್‌ಗೆ ಆಯ್ಕೆಯಾಗಿರಬಾರದು.
- ವ್ಯಾಸಂಗ ಪ್ರೋತ್ಸಾಹಧನ /ಫೆಲೋಶಿಪ್ ಅನ್ನು ಮೂರು ವರ್ಷಗಳಿಗಿಂತ ಹೆಚ್ಚಿನ ಅವಧಿಗೆ ಒದಗಿಸತಕ್ಕದ್ದಲ್ಲ.

4. ಜೀವಜಲ (ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸಲು ಆರ್ಥಿಕ ನೆರವು)

ನಿಬಂಧನೆಗಳು:

- ಅರ್ಜಿದಾರರು ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿರಬೇಕು ಹಾಗೂ ಸಂಬಂಧಪಟ್ಟ ಪ್ರಾಧಿಕಾರದಿಂದ ಜಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.
- ಖಾಲಿ ಜಮೀನುಗಳಿಗೆ ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿಲ್ಲದೆ ಮಳೆ ಆಧಾರಿತವಾಗಿ ಖುಷ್ಕಿಯಾಗಿರಬೇಕು.
- ವೀರಶೈವ ಲಿಂಗಾಯತ ಸಮುದಾಯದ ಹಿಂದುಳಿದ ವರ್ಗಗಳ ಇಲಾಖೆ ವ್ಯಾಪ್ತಿಯಲ್ಲಿ ಒಳಪಡುವ ನಿಗಮಗಳಲ್ಲಿ ಬೇರೆ ಯಾವುದಾದರು ಯೋಜನೆಗಳಲ್ಲಿ ಸಾಲ ಅಥವಾ ಇತರೆ ಆರ್ಥಿಕ ಸೌಲಭ್ಯ ಪಡೆದಿರಬಾರದು.
- ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/- ಹಾಗೂ ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಮಿತಿಯಲ್ಲಿರಬೇಕು.

5. ಸ್ವಸಹಾಯ ಸಂಘಗಳಿಗೆ ಉತ್ತೇಜನ (ಸ್ವಸಹಾಯ ಸಂಘಗಳಿಗೆ ಸಾಲ ಮತ್ತು ಸಹಾಯಧನ)

ನಿಬಂಧನೆಗಳು:

- ಈ ಯೋಜನೆಯಲ್ಲಿ ಸಾಲ ಪಡೆಯ ಬಯಸುವ ಅರ್ಜಿದಾರರು ಯಾವುದಾದರು ಆರ್ಥಿಕ ಚಟುವಟಿಕೆ ಕೈಗೊಳ್ಳಬೇಕು.
- ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿದ್ದು ಸ್ವಸಹಾಯ ಗುಂಪುಗಳನ್ನು ರಚಿಸಿಕೊಂಡಿರಬೇಕು ಸ್ವಸಹಾಯ ಸಂಘದ ಮುಖೇನ ಸದಸ್ಯರಿಗೆ ಸೌಲಭ್ಯ ಒದಗಿಸಲಾಗುವುದು.
- ಸ್ವಸಹಾಯ ಸಂಘವು ತಮ್ಮ ವ್ಯಾಪ್ತಿಯಲ್ಲಿ ಬರುವ ಬ್ಯಾಂಕ್ ಶಾಖೆಯಲ್ಲಿ ಖಾತೆ ಹೊಂದಿರಬೇಕು.

6. ಕಾಯಕಕಿರಣ (ವೃತ್ತಿ ಕಸುಬುದಾರರು ಹಾಗೂ ಕುಶಲಕರ್ಮಿಗಳಿಗೆ ಸಾಲ ಮತ್ತು ಸಹಾಯಧನ)

ನಿಬಂಧನೆಗಳು:

- ಅರ್ಜಿದಾರರು ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿರಬೇಕು ಹಾಗೂ ಸಂಬಂಧಪಟ್ಟ ಪ್ರಾಧಿಕಾರದಿಂದ ಜಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.
- ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/- ಹಾಗೂ ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಮಿತಿಯಲ್ಲಿರಬೇಕು.
- ಅರ್ಜಿದಾರರ ವಯಸ್ಸು 18 ವರ್ಷ ಮೇಲ್ಪಟ್ಟು 55 ವರ್ಷ ಒಳಗಿನವರಾಗಿರಬೇಕು.
- ಕಳೆದ 03 ವರ್ಷಗಳಿಂದ ಸರ್ಕಾರದ/ ನಿಗಮದ ಬೇರೆ ಯಾವುದಾದರೂ ಯೋಜನೆಗಳಲ್ಲಿ ಸಹಾಯಧನ / ಸಾಲ ಪಡೆದವರು ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಲ್ಲ.
- ಒಂದು ಕುಟುಂಬದಲ್ಲಿ ಒಬ್ಬ ಅಭ್ಯರ್ಥಿಗೆ ಮಾತ್ರ ಅವಕಾಶವಿರುತ್ತದೆ.

7. ಶರಣ ಸೇನೆ (ಸೇನೆ ಹಾಗೂ ಸಿವಿಲ್ ಪೋಲಿಸ್ ಸೇವೆಗೆ ಸೇರಲು ಇಚ್ಛಿಸುವ ಅಭ್ಯರ್ಥಿಗಳಿಗೆ ತರಬೇತಿ)

<u>ನಿಬಂಧನೆಗಳು:</u>

- ವಯೋಮಿತಿ: ಅಭ್ಯರ್ಥಿಯು ಗರಿಷ್ಠ ವಯೋಮಿತಿ 17 ರಿಂದ 35 ವರ್ಷಗಳು.
- ಅರ್ಜಿದಾರರು ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿರಬೇಕು ಹಾಗೂ ಸಂಬಂಧಪಟ್ಟ ಪ್ರಾಧಿಕಾರದಿಂದ ಜಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.
- ಕುಟುಂಬದ ವಾರ್ಷಿಕ ವರಮಾನ ರೂ. 5,00,000/-ಗಳ ಮಿತಿಯಲ್ಲಿರಬೇಕು.

(ಅಮರೇಗೌಡ ಹೆಚ್ ಮಾಲಿಪಾಟೀಲ)
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ವೀರಶೈವ ಲಿಂಗಾಯತ
ಅಭಿವೃದ್ಧಿ ನಿಗಮ ನಿಯಮಿತ